ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಸಹಕಾರ ಸಂಘಗಳ ಅಕ್ರಮ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

151 (272) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ವಿವಿಧ ಸಹಕಾರಿ ಸಂಘ ಸಂಸ್ಥೆಗಳ ಮೇಲೆ ಕಳೆದ ಮೂರು ವರ್ಷಗಳಿಂದ ಬಂದಿರುವ ಗುರುತರವಾದ ಹಣ ದುರುಪಯೋಗದ ಆರೋಪಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ವಿವಿಧ ಸಹಕಾರಿ ಸಂಘ ಸಂಸ್ಥೆಗಳಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಈವರೆವಿಗೆ ಲೆಕ್ಕಪರಿಶೋಧನೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಲೆಕ್ಕಸಂಶೋಧನಾ ವರದಿ ನೀಡುವುದು ;

(ಇ) ಲೆಕ್ಕಪರಿಶೋಧನೆ ಮಾಡದೇ ಇದ್ದಲ್ಲಿ, ಲೆಕ್ಕಪರಿಶೋಧನೆ ಮಾಡದೇ ಇರುವ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)